ಶೌಚಾಲಯ ನಿರ್ಮಾಣಕ್ಕೆ ಫಲಾನುಭವಿಗಳಿಗೆ ಆಯ್ಕೆ ವಿಧಾನ:

1. 2012ರಲ್ಲಿ ನಡೆಸಿದ ಬೇಸ್‌ಲೈನ್ ಸಮೀಕ್ಷೆಯಲ್ಲಿ ಶೌಚಾಲಯ ರಹಿತವೆಂದು ಗುರುತಿಸಲ್ಪಟ್ಟ ಕುಟುಂಬಗಳನ್ನು ಈ ಯೋಜನೆಗೆ ಆಯ್ಕೆ ಮಾಡುವುದು.
2. ಫಲಾನುಭವಿಯು ಸ್ವಚ್ಛ ಭಾರತ್ ಮಿಷನ್ ಮಾರ್ಗಸೂಚಿಯ ಪ್ರಕಾರ ಅರ್ಹ ಫಲಾನುಭವಿಯಾಗಿರಬೇಕು.
3. ಶೌಚಾಲಯ ನಿರ್ಮಾಣಕ್ಕೆ ನಿರ್ಮಲ ಭಾರತ ಅಭಿಯಾನ/ಸಂಪೂರ್ಣ ಸ್ವಚ್ಛತಾ ಆಂದೋಲನದಡಿಯಲ್ಲಿ ಈ ಮೊದಲು ಪ್ರೋತ್ಸಾಹಧನ ಪಡೆದಿರಬಾರದು.
4. ಶೌಚಾಲಯ ಜೊತೆಗೆ ಸ್ನಾನದ ಗೃಹ ನಿರ್ಮಾಣ ಮಾಡಲು ಫಲಾನುಭವಿಗೆ ಅಗತ್ಯ ಜಾಗ ಇರಬೇಕು.
5. ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಿಂದ ಅನುದಾನ ಒದಗಿಸಿರಬೇಕು.

ಪದವಿ ಕಾಲೇಜುಗಳಿಗೆ ಕೊಠಡಿ ನಿರ್ಮಾಣ

45(3432); ಶ್ರೀ ಸುರೇಶ್‌ಬಾಬು ಸಿ.ಬಿ (ಚಿಕ್ಕನಾಯಕನಹಳ್ಳಿ)

ಅ) ಚಿಕ್ಕನಾಯಕನಹಳ್ಳಿ ಮತಕ್ಷೇತ್ರದ ವ್ಯಾಪ್ತಿಯಲ್ಲಿರುವ ಸರ್ಕಾರಿ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು (ವಿವರ ನೀಡುವುದು);

ಆ) ಈ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಕೊಠಡಿಗಳು ಇವೆಯೇ;

ಇ) ಇಲ್ಲದಿದ್ದಲ್ಲಿ, ಹೊಸ ಕೊಠಡಿಗಳ ನಿರ್ಮಾಣಕ್ಕೆ ಇದುವರೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಆರ್.ವಿ. ದೇಶಪಾಂಡೆ (ಮಾನ್ಯ ಉನ್ನತ ಶಿಕ್ಷಣ ಸಚಿವರು)

ಅ) 03.

1. ಚಿಕ್ಕನಾಯಕನಹಳ್ಳಿ
2. ಹುಳಿಯಾರು
3. ಬುಕ್ಕಾಪಟ್ಟಣ

ಆ)

ಕ್ರ. ಸಂ.	ಕಾಲೇಜಿನ ಹೆಸರು	ವಿದ್ಯಾರ್ಥಿಗಳ ಸಂಖ್ಯೆ	ಲಭ್ಯವಿರುವ ಕೊಠಡಿ
1	ಚಿಕ್ಕನಾಯಕನಹಳ್ಳಿ	785	16
2	ಹುಳಿಯಾರು	607	15
3	ಬುಕ್ಕಾಪಟ್ಟಣ	186	7

ಇ) 2014–15ನೇ ಸಾಲಿನಲ್ಲಿ ಹೆಚ್ಚುವರಿ ತಳಗತಿ ಕೊಠಡಿಗಳ ನಿರ್ಮಾಣಕ್ಕಾಗಿ ಚಿಕ್ಕನಾಯಕನಹಳ್ಳಿ ಮತ್ತು ಬುಕ್ಕಾಪಟ್ಟಣ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ತಲಾ ರೂ. 34.00 ಲಕ್ಷಗಳನ್ನು ಒದಗಿಸಲಾಗಿರುತ್ತದೆ. ಅನುದಾನದ ಲಭ್ಯತೆ ಆಧಾರ ಹೆಚ್ಚುವರಿ ಕೊಠಡಿ ಮತ್ತು ಇತರೆ ಅಗತ್ಯ ಮೂಲಭೂತ ಸೌಕರ್ಯ ಒದಗಿಸಲಾಗುವುದು.

ಮಹಾತ್ಮಗಾಂಧಿ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ

2410(3387); ಶ್ರೀ ಐಹೋಳೆ ಡಿ. ಮಹಾಲಿಂಗಪ್ಪ (ರಾಯಭಾಗ)

ಅ) 2014–15ನೇ ಸಾಲಿನಲ್ಲಿ ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಗೆ ಕೇಂದ್ರ ಸರ್ಕಾರ ಎಷ್ಟು ಅನುಧಾನ ಬಿಡುಗಡೆ ಮಾಡಿದೆ; ಈ ಯೋಜನೆಗೆ ರಾಜ್ಯದ ಪಾಲಿನ ಅನುದಾನವೆಷ್ಟು;

ಆ) ಸದರಿ ಯೋಜನೆಯಡಿ ಬೆಳಗಾವಿ ಜಿಲ್ಲೆಯಲ್ಲಿ ಪ್ರತಿಯೊಂದು ವಿಧಾನಸಭಾ ಕ್ಷೇತ್ರಕ್ಕೆ ಮೀಸಲಿಟ್ಟ ಹಣವೆಷ್ಟು; ಈ ಅವಧಿಯಲ್ಲಿ ತೆಗೆದುಕೊಂಡ ಕಾಮಗಾರಿಗಳು ಯಾವುವು (ವಿಧಾನಸಭಾ ಹಾಗೂ ಕಾಮಗಾರಿಗಳವಾರು ವಿವರ ನೀಡುವುದು);

ಇ) ಈ ಕಾಮಗಾರಿಗಳ ಪೈಕಿ ಎಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ; ಅಪೂರ್ಣಗೊಂಡಿರುವ ಕಾಮಗಾರಿಗಳು ಎಷ್ಟು;

ಈ) ಪೂರ್ಣಗೊಂಡ ಕಾಮಗಾರಿಗಳಿಗೆ ವೆಚ್ಚ ಮಾಡಿದ ಹಣವೆಷ್ಟು (ವಿವರ ನೀಡುವುದು)?